# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ನಗರ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಅಮೃತ ಶಿಶು ನಿವಾಸ ತಾಯಿ ಮತ್ತು ಮಕ್ಕಳ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಬಸವನಗುಡಿ, ಬೆಂಗಳೂರು ಆಸ್ಪತ್ರೆಗೆ ಸಹಾಯಾನುದಾನ ಬಿಡುಗಡೆಗೊಳಿಸುವ ಬಗ್ಗೆ.

**ಓದಲಾಗಿದೆ:**

1. ಆರ್ಥಿಕ ಇಲಾಖೆ ವೆಚ್ಚ 5 ಶಾಖೆಯ ಕಡತ ಸಂಖ್ಯೆ: ಆಇ 465 ವೆಚ್ಚ 5/2022(ಇ)

ಬೆಂಗಳೂರು ನಗರ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಅಮೃತ ಶಿಶು ನಿವಾಸ ತಾಯಿ ಮತ್ತು ಮಕ್ಕಳ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಬಸವನಗುಡಿ, ಬೆಂಗಳೂರು ಆಸ್ಪತ್ರೆಗೆ 2022-23ನೇ ಸಾಲಿನ ಆಯವ್ಯಯ ಕಂಡಿಕೆ 150 ರಲ್ಲಿ ವಿಶೇಷ ನೆರವು ನೀಡಲಾಗುವುದು ಎಂದು ಘೋಷಿಸಲಾಗಿದ್ದು, ಅದರಂತೆ ಅಮೃತ ಶಿಶು ನಿವಾಸ ತಾಯಿ ಮತ್ತು ಮಕ್ಕಳ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಬಸವನಗುಡಿ, ಬೆಂಗಳೂರು ಆಸ್ಪತ್ರೆಗೆ ಮಾನ್ಯ ಮುಖ್ಯ ಮಂತ್ರಿಯವರು ರೂ.10.00ಕೋಟಿಗಳನ್ನು ಬಿಡುಗಡೆ ಮಾಡಲು ನಿರ್ದೇಶಿಸಿರುತ್ತಾರೆ. ಸದರಿ ಆಸ್ಪತ್ರೆಗೆ ಸಹಾಯಾನುದಾನ ಪಾವತಿಸುವ ಸಂಬಂಧ ಮೇಲೆ ಓದಲಾದ (1)ರ ಕಡತದಲ್ಲಿ ಪ್ರಸ್ತಾವಿಸಲಾಗಿದೆ. ಪ್ರಸ್ತಾವನೆಯನ್ನು ಪರಿಶೀಲಿಸಿ ಅನುದಾನವನ್ನು ಬಿಡುಗಡೆಗೊಳಿಸುವ ಸಂಬಂಧ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಇ 551 ವೆಚ್ಚ 6/2022 ಇ ದಿನಾಂಕ:03ನೇ ಆಗಸ್ಟ್ 2022**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಜಿಲ್ಲಾ ವಲಯದ ಲೆಕ್ಕ ಶೀರ್ಷಿಕೆ 2210-00-106-0-48-090(2211-00-196-1-01) ಸರ್ಕಾರೇತರ ಸಂಸ್ಥೆಗಳು ನಡೆಸುತ್ತಿರುವ ಪ್ರಾ.ಆ.ಕೇಂದ್ರಗಳಿಗೆ ಸಹಾಯಾನುದಾನ ಅಡಿ ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿಗೆ ರೂ.1000.00 (ರೂಪಾಯಿ ಹತ್ತು ನೂರ ಲಕ್ಷಗಳು ಮಾತ್ರ) ಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300 ರಿಂದ ಹೆಚ್ಚುವರಿಯಾಗಿ ಬಿಡುಗಡೆಗೊಳಿಸಿದೆ.

ಸದರಿ ಅನುದಾನವನ್ನು ಜಿಲ್ಲಾ ಪಂಚಾಯಿತಿ ನಿಧಿಗೆ ಜಮೆ ಮಾಡಿಕೊಂಡು, ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು, ಬೆಂಗಳೂರು ನಗರ ಅವರು ಸ್ವೀಕರ್ತನ ರಶೀದಿ ಮೇಲೆ ಡ್ರಾ ಮಾಡಿ ಅಮೃತ ಶಿಶು ನಿವಾಸ ತಾಯಿ ಮತ್ತು ಮಕ್ಕಳ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಬಸವನಗುಡಿ, ಬೆಂಗಳೂರು ಆಸ್ಪತ್ರೆಗೆ ನೇರವಾಗಿ ಒದಗಿಸಲು ತಿಳಿಸಿದೆ.

| ಕ್ರ.ಸಂ. | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಬಿಡುಗಡೆಗೊಳಿಸಿದ ಲೆಕ್ಕ ಶೀರ್ಷಿಕೆ | ಬಿಡುಗಡೆಗೊಳಿಸಿದ ಮೊತ್ತ(ಲಕ್ಷಗಳಲ್ಲಿ) |
|---|---|---|---|---|
| 1 | ಬೆಂಗಳೂರು ನಗರ | 2210-00-106-0-48-090 | 2515-00-196-1-05-300 | 1000.00 |
| | | | ಒಟ್ಟು | **1000.00** |

**(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ನಿಯಮಾನುಸಾರ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು) .**

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್.ಬುಗಟ್ಯಾಗೋಳ)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು.

2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ.
3. ಆಯುಕ್ತರು, ಖಜಾನೆ ಆಯುಕ್ತಾಲಯ, 5 & 6ನೇ ಮಹಡಿ, ಕೆಪಿಟಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ.
5. ಜಿಲ್ಲಾ ಖಜಾನಾಧಿಕಾರಿಗಳು,ಬೆಂಗಳೂರು ನಗರ.
6. ಶಾಖಾಧಿಕಾರಿ, ಆರ್ಥಿಕ ಇಲಾಖೆ (ವೆಚ್ಚ 5)ರವರ ಕಡತಕ್ಕೆ.
7. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ.